# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 387 (404) |
| ಸದಸ್ಯರ ಹೆಸರು: | ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ಸಚಿವರು | ಮಾನ್ಯ ಕಂದಾಯ ಸಚಿವರು |
| ಉತ್ತರಿಸಬೇಕಾದ ದಿನಾಂಕ: | 04-02-2021 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಂದಾಯ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸದೆ ಅನುಭವ ಮತ್ತು ತರಬೇತಿ ಇಲ್ಲದ ಸಚಿವಾಲಯದ ಬಡ್ತಿ ಪಡೆದ ನೌಕರರುಗಳನ್ನು ತಾಲ್ಲೂಕುಗಳ ತಹಶೀಲ್ದಾರ್ ಹುದ್ದೆಗೆ ನೇಮಕ ಮಾಡುತ್ತಿರುವುದು ಸರ್ಕಾರದ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ವಿರುದ್ಧವಲ್ಲವೇ; (ವಿವರ ನೀಡುವುದು) | ಕಂದಾಯ ಇಲಾಖೆಯ ವೃಂದ ಮತ್ತು ನೇಮಕಾತಿಗಳಲ್ಲಿ ಅವಕಾಶವಿರುವುದಿಲ್ಲ. ಆದರೆ, ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮ 1977 ರಲ್ಲಿನ ಅವಕಾಶದನ್ವಯ ಬೇರೆ ಇಲಾಖೆಯ ಅಧಿಕಾರಿಗಳನ್ನು ಕಂದಾಯ ಇಲಾಖೆಯ ತಹಶೀಲ್ದಾರ್ ಹುದ್ದೆಗೆ ನಿಯೋಜನೆ ಮೇಲೆ ನೇಮಕ ಮಾಡಲಾಗುತ್ತಿದೆ. |
| ಆ) | ಈ ರೀತಿಯಲ್ಲಿ ಸಚಿವಾಲಯದ ಮತ್ತು ವಿಧಾನ ಸಭೆ / ವಿಧಾನ ಪರಿಷತ್‌ನಿಂದ ತಹಶೀಲ್ದಾರರಾಗಿ ಹೋದ ಅಧಿಕಾರಿಗಳಿಂದ ಉಂಟಾಗಿರುವ ಲೋಪಗಳ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ; (ವಿವರ ನಿಡುವುದು) | ಉದ್ಭವಿಸುವುದಿಲ್ಲ |
| ಇ) | ಈ ರೀತಿಯಲ್ಲಿ ಸಚಿವಾಲಯದ / ನಿಯೋಜನೆ ಮೇರೆಗೆ ಬೇರೆ ಇಲಾಖೆ / ನಿಗಮ / ಮಂಡಳಿಗಳಿಗೆ ನಿಯೋಜಿಸಿದ್ದಲ್ಲಿ ಮಾತ್ರ ಇಲಾಖೆಯ ಸಿಬ್ಬಂದಿಗಳು ಮತ್ತು ಅಧಿಕಾರಿಗಳು ಬಡ್ತಿಯಿಂದ ವಂಚಿತರಾಗುವುದಿಲ್ಲವೇ; ಇದಕ್ಕೆ ಸರ್ಕಾರದ ಸ್ಪಷ್ಟೀಕರಣವೇನು; | ಪ್ರಸ್ತುತ ಕಂದಾಯ ಇಲಾಖೆಯ ತಹಶೀಲ್ದಾರ್ ಹುದ್ದೆಗಳು ಖಾಲಿ ಇರುವುದರಿಂದ ಸಚಿವಾಲಯದ ಅಧಿಕಾರಿ / ನೌಕರರುಗಳನ್ನು ಹಾಗೂ ಬೇರೆ ಇಲಾಖೆಯ ಅಧಿಕಾರಿ / ನೌಕರರುಗಳನ್ನು ನಿಯೋಜನೆ ಮೇರೆಗೆ ನೇಮಕ ಮಾಡಿಕೊಳ್ಳಲಾಗುತ್ತದೆ. ಈ ಹಿನ್ನೆಲೆಯಲ್ಲಿ ಮಾತ್ರ ಇಲಾಖೆಯ ಯಾವುದೇ ಸಿಬ್ಬಂದಿ ಮತ್ತು ಅಧಿಕಾರಿಗಳು ಬಡ್ತಿಯಿಂದ ವಂಚಿತರಾಗಲು ಅವಕಾಶವಿರುವುದಿಲ್ಲ. |
| ಈ) | ಈ ರೀತಿ ಬೇರೆ ಇಲಾಖೆ ನಿಗಮ / ಮಂಡಳಿಗಳಿಗೆ ನಿಯೋಜನೆ ಮೇಲೆ ಕಳುಹಿಸದಿರಲು ಸರ್ಕಾರದ ಕ್ರಮಗಳೇನು? (ವಿವರ ನೀಡುವುದು) | ಉದ್ಭವಿಸುವುದಿಲ್ಲ |

ಕಡತ ಸಂಖ್ಯೆ: ಕಂಇ 06 ಎಎಸ್‌ಡಿ 2021

(ಆರ್. ಅಶೋಕ)
ಕಂದಾಯ ಸಚಿವರು.